# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ ಸಭೆ/2020-21 ದಿನಾಂಕ : 16-02-2021

## -: ಸಭಾ ಸೂಚನಾ ಪತ್ರ :-

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ತಿದ್ದುಪಡಿ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020-21 ದಿನಾಂಕ : 02-10-2020.

-****-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ-29 ಕಾಚರಕನಹಳ್ಳಿಯ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ : 20-02-2021 ಶನಿವಾರ ರಂದು ಬೆಳಿಗ್ಗೆ 10-30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಲು ಕೋರಿದೆ.

## -: ಸಭಾ ಅಜೆಂಡಾ :-

| | |
|---|---|
| 1 | ವಾರ್ಡಿನ ವಿವಿಧ ಬಡಾವಣೆಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. |
| 2 | ವಾರ್ಡಿನ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ. |
| 3 | ಕಂದಾಯ ಇಲಾಖೆಗೆ ಸಂಬಂಧಿಸಿದ ಬಗ್ಗೆ. |
| 4 | ನೀರು ಸರಬರಾಜು ಮತ್ತು ಒಳಚರಂಡಿಗೆ (BWSSB) ಸಂಬಂಧಿಸಿದ ವಿಷಯಗಳ ಬಗ್ಗೆ. |
| 5 | ವಿದ್ಯುತ್ ಸರಬರಾಜು (Bescom) ಸಂಬಂಧಿಸಿದ ವಿಷಯಗಳ ಬಗ್ಗೆ. |
| 6 | ಉದ್ಯಾನವನ ಮತ್ತು ಬೀದಿ ದೀಪ ನಿರ್ವಹಣೆಯ ಕುರಿತು |
| 7 | Traffic isues and Law and Order issues |
| 8 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಚರ್ಚಿಸುವ ಬಗ್ಗೆ. |
| 9 | ಮಾನ್ಯ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳು. |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

Assistant Engineer ( Elc)
Lingarajapuram, O&M Unit
E5 Sub Divion BESCOM.

ಸಹಿ/-
ಕಾರ್ಯದರ್ಶಿ ವಾರ್ಡ್ ಸಮಿತಿ-29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-29

ಪ್ರತಿಗಳು:-

1. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.

East Zone
17/2/2021

17/2/2021

Executive Engineer, B.W.S.S.B. East-1 Sub Division, H.R.B.R Layout Bangalore
Sl.No:
Date 18-02-2021

2. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
3. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
4. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.
5. ಕಲ್ಯಾಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
6. ಅರಣ್ಯ ಸಂರಕ್ಷಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ F
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (BWSSB) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (Bescom) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (SWM) (ಸರ್ವಜ್ಞನಗರ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
10. ಸಹಾಯಕ ಕಂದಾಯ ಅಧಿಕಾರಿಗಳು, ಹೆಚ್.ಬಿ.ಆರ್ ಲೇಔಟ್ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂದಿಯನ್ನು ನಿಯೋಜಿಸಲು ಕೋರಿದೆ.
11. ಪೊಲೀಸ್ ಇನ್ಸ್‌ಫೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
12. ಪೊಲೀಸ್ ಇನ್ಸ್‌ಫೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ ರವರು ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳು ಮತ್ತು ಮೂಲಭೂತ ಸೌಕರ್ಯಗಳು ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ (SWD) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೀದಿ ದೀಪಗಳ ವಿಭಾಗ-ಪೂರ್ವ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
16. ಆರೋಗ್ಯ ವೈದ್ಯಾಧಿಕಾರಿಗಳು, ಕಾಚರಕನಹಳ್ಳಿ ರವರು ಖುದ್ದಾಗಿ ಹಾಜರಾಗಲು ಕೋರಿದೆ.
17. ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ರವಾನಿಸಿದೆ.

18 ಉದ್ಯಾನ ವನಗಳ ವಿಭಾಗದ
ಸಹಾಯಕ ತೋಟಗಾರಿಕೆ ಅಧಿಕಾರಿಗಳು

16/2/2021

ಕಾರ್ಯದರ್ಶಿ ವಾರ್ಡ್ ಸಮಿತಿ-29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-29

HC9060
18/02/21

TRAFFIC POLICE
BANASAWADI
Date... 18/02/21
BANGALORE

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 20-02-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ಎ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
4. ಶ್ರೀ.ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಪ್ರಸನ್ನ, ಪದಾಧಿಕಾರಿಗಳು, ಹೆಚ್.ಬಿ.ಆರ್ ಬಡಾವಣೆ, 1ನೇ ಹಂತ ಅಸೋಸಿಯೇಷನ್ (ರಿ) ರವರು
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್,

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ಪುಟ್ಟಸ್ವಾಮಿ, ಸಹಾಯಕ ಅಭಿಯಂತರರು, ಬೆಸ್ಕಾಂ,
2. ಶ್ರೀ.ದವಲ್, ಸಹಾಯಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),
3. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
7. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
8. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
9. ಶ್ರೀಮತಿ ಗೀತಾ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
10. ಶ್ರೀ ಪುಟ್ಟಸ್ವಾಮಿ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
11. ಶ್ರೀಮತಿ ರಾಜಶ್ರೀ, ಕಲ್ಯಾಣ ಇಲಾಖೆ

ಈ ಸಭೆಗೆ ಹಾಜರಾಗಿದ್ದ ಮೇಲ್ಕಂಡ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1) **ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ,** ಕಮ್ಮನಹಳ್ಳಿ ಮುಖ್ಯರಸ್ತೆ, ಹೆಣ್ಣೂರು ಮುಖ್ಯರಸ್ತೆ ಹಾಗೂ ವಾರ್ಡಿನ ಇತರೆ ಪ್ರಮುಖ ರಸ್ತೆಗಳಲ್ಲಿ ಪಾದಾಚಾರಿ ಮಾರ್ಗದಲ್ಲಿ ಸಣ್ಣ ಪುಟ್ಟ ವ್ಯಾಪಾರಿಗಳು ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಾಡಿ, ವ್ಯಾಪಾರ ವಹಿವಾಟು ಮಾಡುತ್ತಿರುವುದು ಕಂಡುಬಂದಿದ್ದು, ಇದರಿಂದ ಪಾದಾಚಾರಿ ಮಾರ್ಗದಲ್ಲಿ ಓಡಾಡುವ ಹಿರಿಯ ನಾಗರೀಕರು ಹಾಗೂ ವಯೋವೃದ್ಧರಿಗೆ ತೊಂದರೆಯಾಗಿರುತ್ತದೆ. ಕೂಡಲೇ ಆರೋಗ್ಯ, ಕಾಮಗಾರಿ ಇಲಾಖೆಯವರು ಪೊಲೀಸರ ನೆರವಿನೊಂದಿಗೆ ಪಾದಾಚಾರಿ ಒತ್ತುವರಿ ಮಾರ್ಗವನ್ನು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ಇಲಾಖೆಗಳಿಗೆ ಆದೇಶಿಸಿದರು.

2) **ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ,** ಕಂದಾಯ ವಿಭಾಗದಿಂದ ವಿವರವನ್ನು ಕೇಳಿದಾಗ ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರು ಮಾತನಾಡಿ, ತೆರಗೆ ವಸೂಲಾತಿಯನ್ನು ಕ್ರಮಬದ್ಧವಾಗಿ ಸಂಗ್ರಹಿಸಲಾಗುತ್ತಿರುತ್ತದೆ. ಇದರ ಜೊತೆಗೆ ಅವಶ್ಯವಿರುವ ಮತದಾರರ ಪಟ್ಟಿಗಳ ಪರಿಷ್ಕರಣೆ ಇತ್ಯಾದಿಗಳನ್ನು ಕಂದಾಯ ವಿಭಾಗದಿಂದ ಕೈಗೊಳ್ಳಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ಉತ್ತರಿಸಿದರು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ), ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ನೀರು ಸರಬರಾಜು ಸ್ಥಿತಿಗತಿಗಳ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ ಸಭೆಯಲ್ಲಿ ಹಾಜರಿದ್ದ ಜಲಮಂಡಳಿ ಅಭಿಯಂತರರು, ಮಾತನಾಡಿ, ವಾರ್ಡ್ ಪ್ರದೇಶದ ಎಲ್ಲಾ ಬಡಾವಣೆಗಳಿಗೆ ಕಾವೇರಿ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದಾಗ, ಇದಕ್ಕೆ ಪೂರಕವಾಗಿ ಸಭೆಯಲ್ಲಿ ಹಾಜರಿದ್ದ ಸದಸ್ಯರು ಧ್ವನಿಗೂಡಿಸಿ, ಇತ್ತೀಚಿನ ದಿನಗಳಲ್ಲಿ ವಾರ್ಡಿನ ಬಡಾವಣೆಗಳಲ್ಲಿ ನೀರು ಸರಬರಾಜು ಸಮರ್ಪಕವಾಗಿ ಸರಬರಾಜಾಗುತ್ತಿರುವುದಾಗಿ ಸಭೆಗೆ ತಿಳಿಸಿದರು.

4) **ವೈದ್ಯಾಧಿಕಾರಿಗಳು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಕೋವಿಡ್–19 ನಿಯಂತ್ರಣದಲ್ಲಿದ್ದು, ಒಟ್ಟು 653 ಪ್ರಕರಣಗಳು ಇದ್ದು, 450 ಹೋಮ್ ಐಸೋಲೇಷನ್ ಪೂರ್ಣಗೊಳಿಸಿರುತ್ತಾರೆ, 180 ಜನ ಆಸ್ಪತ್ರೆಯಿಂದ ಗುಣಮುಖರಾಗಿ ಬಿಡುಗಡೆಯಾಗಿರುತ್ತಾರೆ. 20 ಜನ ಮರಣ ಹೊಂದಿರುತ್ತಾರೆ, ಸಕ್ರಿಯ ಪ್ರಕರಣಗಳು 03 ಆಗಿರುತ್ತವೆ. ನಂತರ ಮಾತನಾಡಿ, ವಾರ್ಡ್ ಪ್ರದೇಶದಲ್ಲಿ 20192 ಜನಕ್ಕೆ ಆರ್.ಟಿ.ಪಿ.ಸಿ.ಆರ್ ತಪಾಸಣೆ ಮಾಡಲಾಗಿರುತ್ತದೆ. 5625 ಜನಕ್ಕೆ ರ್‍ಯಾಪಿಡ್ ತಪಾಸಣೆ ಕೈಗೊಳ್ಳಲಾಗಿರುತ್ತದೆ. ಬಿಬಿಎಂಪಿ ಗೆ ಕೋವಿಶೀಲ್ಡ್ ವ್ಯಾಕ್ಸಿನ್ ಔಷಧಿ ಬಂದಿದ್ದು, ವಾರ್ಡ್ ಪ್ರದೇಶದಲ್ಲಿ 1) Lifewing Hospital 2) Zion Hospital and 3) Florence Nursing Home ಆಸ್ಪತ್ರೆಗಳನ್ನು ಗುರುತಿಸಿದ್ದು, ಪ್ರಥಮವಾಗಿ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ವ್ಯಾಕ್ಸಿನೇಷನ್ ಔಷಧಿಯನ್ನು ಈಗಾಗಲೇ ನೀಡಲಾಗಿರುತ್ತದೆ. ತದನಂತರ ಹಂತ ಹಂತವಾಗಿ ಎಲ್ಲಾ ಇಲಾಖಾವಾರು ಸಿಬ್ಬಂದಿಗೆ ವ್ಯಾಕ್ಸಿನೇಷನ್ ನೀಡಲಾಗುವುದೆಂದು ಸಭೆಗೆ ತಿಳಿಸಿದರು. ಹಾಗೂ ಇತ್ತೀಚೆಗೆ ಮಹಾರಾಷ್ಟ್ರ ಹಾಗೂ ಕೇರಳದಿಂದ ಆಗಮಿಸುವ ಸಾರ್ವಜನಿಕರು ಪತ್ತೆಯಾದಲ್ಲಿ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

5) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ** ಆಸ್ಪತ್ರೆಗೆ ವಿವಿಧ ಕಾಯಿಲೆಗಳ ಚಿಕಿತ್ಸೆಗಾಗಿ ಆಗಮಿಸುವ ಮಹಿಳೆಯರು ವಯೋವೃದ್ಧರು ಹಿರಿಯ ನಾಗರೀಕರು ಆಸ್ಪತ್ರೆ ಮುಂಭಾಗದಲ್ಲಿ ಸಾಲುಗಟ್ಟಿ ನಿಲ್ಲಬೇಕಾಗಿರುತ್ತದೆ. ಆದ್ದರಿಂದ ಮಳೆ ಹಾಗೂ ಬಿಸಿಲನ್ನು ತಡೆಯಲು ನೆರಳಿನ ವ್ಯವಸ್ಥೆ ಶೀಟ್ ರೂಫ್ ಅಳವಡಿಸಿಕೊಡಲು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ. ಈ ಬಗ್ಗೆ ಚರ್ಚಿಸಿ, ಕ್ರಮ ಕೈಗೊಳ್ಳಲು ಪ್ರಥಮ ಆದ್ಯತೆ ನೀಡಲು ಅಭಿಯಂತರರಿಗೆ ಸೂಚಿಸಿದರು.

6) **<u>ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ರವರು ಮಾತನಾಡಿ</u>** ಜಲವಾಯು ವಿಹಾರ್ ಮುಖ್ಯದ್ವಾರದ ಪ್ರವೇಶ ದ್ವಾರದಲ್ಲಿ ಎರಡೂ ಕಡೆ 100 ಮೀಟರ್ ಅಂತರದಲ್ಲಿ ವಾಹನ ನಿಲುಗಡೆ ನಿಷೇಧಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ ಈ ಬಗ್ಗೆ ಚರ್ಚಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಸಂಚಾರಿ ಪೊಲೀಸ್ ಇಲಾಖಾಧಿಕಾರಿಗಳಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar. N

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**<u>ಪ್ರತಿಯನ್ನು</u>**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ.
6) ಕಛೇರಿ ಕಡತಕ್ಕೆ.

04/03/2021 4:17 04/03/21